# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 252 (254) |
| ಮಾನ್ಯ ಸದಸ್ಯರ ಹೆಸರು | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 17/02/2022 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರವು ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯನ್ನು ಸ್ಥಾಪಿಸಿರುವುದು ನಿಜವೇ; ಪ್ರಸ್ತುತ ಲಕ್ಷಾಂತರ ಕಟ್ಟಡ ಕಾರ್ಮಿಕರು ಕೋವಿಡ್-19ರ ಪ್ರಭಾವದಿಂದಾಗಿ ಕೆಲಸ ಕಳೆದುಕೊಂಡಿದ್ದು, ಇಂತಹ ಎಷ್ಟು ಕಾರ್ಮಿಕರಿಗೆ ಇಂತಹ ನೆರವನ್ನು ಕಾರ್ಮಿಕರ ಕಲ್ಯಾಣ ನಿಧಿಯಿಂದ ನೀಡಲಾಗಿದೆ; | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ವಿವಿಧ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳ ವೆಚ್ಚದ ಮೇಲೆ ಶೆ.1 ರಷ್ಟು ಸಂಗ್ರಹವಾಗುವ ಸುಂಕ ಮೊತ್ತದ ನಿರ್ವಹಣೆಗಾಗಿ ಸುಂಕ ನಿಧಿಯನ್ನು ಸ್ಥಾಪಿಸಲಾಗಿದೆ.<br><br>ಈ ಸುಂಕ ನಿಧಿಯಿಂದ ಕೋವಿಡ್-19 ರ ಒಂದನೇ ಅಲೆ ಮತ್ತು ಎರಡನೇ ಅಲೆಯಿಂದಾಗಿ ಸಂಕಷ್ಟಕ್ಕೊಳಗಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಭದ್ರತೆಗಾಗಿ ಮಂಡಳಿಯ ವತಿಯಿಂದ ಈ ಕೆಳಕಂಡ ಪರಿಹಾರಗಳನ್ನು ನೀಡಲಾಗಿದೆ.<br><br>ಒಂದನೇ ಅಲೆ ಸಂದರ್ಭದಲ್ಲಿ:<br><br>1. ಮಾನ್ಯ ಮುಖ್ಯಮಂತ್ರಿಗಳ ಘೋಷಣೆಯಂತೆ 16,48,431 ಮಂಡಳಿಯ ಫಲಾನುಭವಿಗಳಿಗೆ ತಲಾ ರೂ.5,000/- ಗಳಂತೆ ಒಟ್ಟು ರೂ.824.21ಕೋಟಿ ಸಹಾಯಧನವನ್ನು ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮೂಲಕ (DBT) ಜಮಾ ಮಾಡಲಾಗಿರುತ್ತದೆ.<br>2. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ 7.15 ಲಕ್ಷ ಆಹಾರ ಸಾಮಾಗ್ರಿಗಳ ಕಿಟ್ ಗಳನ್ನು ತಯಾರಿಸಿ ವಿತರಿಸಲಾಗಿರುತ್ತದೆ. |

| | | |
|---|---|---|
| | | 3. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಲಾಕ್‌ಡೌನ್ ಪ್ರಾರಂಭದಿಂದ ಇದುವರೆಗೂ 89.87 ಲಕ್ಷ ಸಿದ್ಧಪಡಿಸಿದ ಆಹಾರದ ಪ್ಯಾಕೆಟ್ ಗಳನ್ನು ವಿತರಿಸಲಾಗಿರುತ್ತದೆ.<br><br>ಎರಡನೇ ಅಲೆಯ ಸಂದರ್ಭದಲ್ಲಿ<br><br>1. ತಲಾ ರೂ.3,000/- ಗಳಂತೆ ಸುಮಾರು 19,02,018 ಕಾರ್ಮಿಕರಿಗೆ ಒಟ್ಟು ರೂ.570.60 ಕೋಟಿ ಮೊತ್ತವನ್ನು ಫಲಾನುಭವಿಗಳ ಬ್ಯಾಂಕ್ |
| | | ಖಾತೆಗೆ ನೇರ ನಗದು ವರ್ಗಾವಣೆ (DBT) ಮೂಲಕ ಜಮಾ ಮಾಡಲಾಗಿದೆ. ಉಳಿದ ಫಲಾನುಭವಿಗಳಿಗೆ ಬ್ಯಾಂಕ್‌ಖಾತೆಗೆ ರೂ. 3,000/- ಗಳನ್ನು ಜಮಾ ಮಾಡಲು ಕ್ರಮವಹಿಸಲಾಗುತ್ತಿದೆ.<br>2. ಮಂಡಳಿಯ ವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಆಹಾರ ಸಮಸ್ಯೆಯನ್ನು ನೀಗಿಸಲು ರಾಜ್ಯಾದ್ಯಂತ 23.42 ಲಕ್ಷ ಕಾರ್ಮಿಕರಿಗೆ ಆಹಾರ ಸಾಮಾಗ್ರಿಗಳ ಕಿಟ್‌ಗಳನ್ನು ವಿತರಿಸಲಾಗಿದೆ.<br>3. ಮಂಡಳಿಯ ವತಿಯಿಂದ ನೋಂದಾಯಿತ ಅಸಂಘಟಿತ ಕಾರ್ಮಿಕರಿಗೆ ಸಮಸ್ಯೆಯನ್ನು ನೀಗಿಸಲು ರಾಜ್ಯಾದ್ಯಂತ 3.80 ಲಕ್ಷ ಕಾರ್ಮಿಕರಿಗೆ ಆಹಾರ ಸಾಮಾಗ್ರಿಗಳ ಕಿಟ್‌ಗಳನ್ನು ವಿತರಿಸಲಾಗಿದೆ.<br>4. ನೋಂದಾಯಿತ ಅರ್ಹ 21.07 ಲಕ್ಷ ಕಾರ್ಮಿಕರಿಗೆ ಸುರಕ್ಷತಾ ಮತ್ತು ನೈರ್ಮಲ್ಯ ಕಿಟ್‌ಗಳನ್ನು ವಿತರಿಸಲಾಗಿದೆ. |
| ಆ) | ಈ ನಿಧಿಯಲ್ಲಿ ಎಷ್ಟು ಪ್ರಮಾಣದ ಹಣ ಸಂಗ್ರಹವಾಗುತ್ತಿದೆ; ಅದರ ಬಳಕೆ ಯಾವ್ಯಾವುದಕ್ಕೆ ಎಷ್ಟು ಪ್ರಮಾಣದಲ್ಲಿ ಆಗುತ್ತಿದೆ ಎಂಬ ಮಾಹಿತಿ ನೀಡುವುದು? | 2007 ರಿಂದ ಜನವರಿ , 2022 ರವರೆಗೆ ವಿವಿಧ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳ ವೆಚ್ಚದ ಮೇಲೆ ಶೆ.1 ರಂತೆ ಒಟ್ಟು ರೂ. 8507.47 ಕೋಟಿಗಳಷ್ಟು ಹಣ ಸಂಗ್ರಹವಾಗಿದೆ. |

ಈ ಮೊತ್ತವನ್ನು ಮಂಡಳಿಯ ನೋಂದಾಯಿತ ಫಲಾನುಭವಿಗಳು ಮತ್ತು ಅವರ ಅವಲಂಭಿತರಿಗಾಗಿ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ವಿತರಿಸಲು ಮತ್ತು ಮಂಡಳಿಯ ಆಡಳಿತಾತ್ಮಕ ವೆಚ್ಚಕ್ಕಾಗಿ ಬಳಸಲಾಗುತ್ತಿದೆ. ವಿವರ ಈ ಕೆಳಕಂಡಂತಿದೆ:

| ಕ್ರ. ಸಂ. | ವಿವರ | ಖರ್ಚು ಮಾಡಿರುವ ಮೊತ್ತ (ರೂ.ಗಳಲ್ಲಿ) |
|---|---|---|
| 1. | ವಿವಿಧ ಕಲ್ಯಾಣ ಮತ್ತು ಸಮಾಜಿಕ ಭದ್ರತಾ ಸೌಭ್ಯಗಳ ವಿತರಣೆಗಾಗಿ ಮತ್ತು ಕೋವಿಡ್-19 ರ ಒಂದನೇ ಮತ್ತು ಎರಡನೇ ಅಲೆ ಸಂದರ್ಭದಲ್ಲಿ ಪರಿಹಾರ ವಿತರಣೆಗಾಗಿ | 3039,66,77,783/- |
| 2. | ಆಡಳಿತಾತ್ಮಕ ವೆಚ್ಚಕ್ಕಾಗಿ | 169,01,58,563/- |

**ಕಾಇ 65 ಎಲ್ಇಟಿ 2022**

*(ಅರಬೈಲ್ ಶಿವರಾಂ ಹೆಬ್ಬಾರ್)*
*ಕಾರ್ಮಿಕ ಸಚಿವರು*